ಪಂಚಾಯತ್ ರಾಜ್ ಸಂಸ್ಥೆಗಳ ಬಲವರ್ಧನೆ

427 (859) ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಪಂಚಾಯತ್ ರಾಜ್ ಸಂಸ್ಥೆಗಳ ಆರ್ಥಿಕ ಮತ್ತು ಅಧಿಕಾರಯುತ ಬೆಳವಣಿಗೆಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಗ್ರಾಮ ಸ್ವರಾಜ್ ಯೋಜನೆಯ ಅನುಷ್ಠಾನದ ವಿವರಗಳೇನು;

(ಇ) ಪಂಚಾಯತ್‌ರಾಜ್ ಇಲಾಖೆಗೆ ವಿಶ್ವ ಬ್ಯಾಂಕ್‌ನಿಂದ ಪಡೆದ ಸಾಲದ ನೆರವಿನ ವಿವರಗಳೇನು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು)

(ಅ) ಆಡಳಿತ ವಿಕೇಂದ್ರೀಕರಣ ವ್ಯವಸ್ಥೆಯಡಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವ್ಯಾಪಕವಾದ ಅಧಿಕಾರಗಳನ್ನು ಸರ್ಕಾರದಿಂದ ವರ್ಗಾಯಿಸಲಾಗಿದ್ದು ಅವುಗಳ ಕಾರ್ಯವ್ಯಾಪ್ತಿಯಲ್ಲಿ ಯಾವುದೇ ಹಸ್ತಕ್ಷೇಪಗಳಿರುವುದಿಲ್ಲ. ಅಲ್ಲದೇ ಪ್ರಸ್ತುತ ಅನುಷ್ಠಾನಗೊಳ್ಳುತ್ತಿರುವ ಕೇಂದ್ರ ಪುರಸ್ಕೃತ ಹಾಗೂ ರಾಜ್ಯ ಸರ್ಕಾರದ ಹಲವು ಯೋಜನೆಗಳಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಜಲ ನಿರ್ಮಲ ಯೋಜನೆ, ಗ್ರಾಮ ಸ್ವರಾಜ್ ಯೋಜನೆ, ಸುವರ್ಣ ಗ್ರಾಮೋದಯ ಯೋಜನೆ, ನೀರು ಸರಬರಾಜು, ವಸತಿ ಯೋಜನೆಗಳು ಮತ್ತು ಇತ್ಯಾದಿ ಯೋಜನೆಗಳ ಮೂಲಕ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅದರಲ್ಲೂ ತಳ ಮಟ್ಟದಲ್ಲಿನ ಗ್ರಾಮ ಪಂಚಾಯತಿಗಳಿಗೆ ಸರ್ಕಾರದಿಂದ ಹೆಚ್ಚಿನ ಅನುದಾನಗಳನ್ನು ಒದಗಿಸುವ ಮೂಲಕ ಪಂಚಾಯತ್ ರಾಜ್ ಸಂಸ್ಥೆಗಳನ್ನು ಆರ್ಥಿಕವಾಗಿ ಸದೃಢಗೊಳಿಸಲಾಗಿದೆ. ಇದಲ್ಲದೇ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ1993 ಮತ್ತು ಅದಕ್ಕೆ ಕಾಲ ಕಾಲಕ್ಕೆ ಮಾಡಲಾದ ಎಲ್ಲಾ ತಿದ್ದುಪಡಿಗಳ ಅನುಸಾರ ನಿರ್ದಿಷ್ಟ ಪಡಿಸಿದ ಪ್ರಕಾರ್ಯಗಳ ಅನುಸಾರ ಪಂಚಾಯತ್ ರಾಜ್ ಸಂಸ್ಥೆಗಳ ಬೆಳವಣಿಗೆಗೆ ಕರ್ನಾಟಕ ಸರ್ಕಾರವು ವ್ಯಾಪಕ ಕ್ರಮಕೈಗೊಂಡಿದೆ.

(ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಬರುವ ವಿಶ್ವ ಬ್ಯಾಂಕ್ ಆರ್ಥಿಕ ನೆರವಿನ ಯೋಜನೆ ಇದಾಗಿದೆ. ಗ್ರಾಮ ಸ್ವರಾಜ್ ಯೋಜನೆಯು ಪ್ರಮುಖವಾಗಿ ಡಾ:ಡಿ.ಎಂ. ನಂಜುಂಡಪ್ಪ ಪ್ರಾದೇಶಿಕ ಅಸಮತೋಲನ ನಿವಾರಣಾ ವರದಿಯಲ್ಲಿ ಗುರುತಿಸಿರುವ ರಾಜ್ಯದ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳ (14 ಜಿಲ್ಲೆಗಳಲ್ಲಿ ಬರುವ) 1341 ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನಗೊಳ್ಳುತ್ತಿದೆ.

ಯೋಜನಾ ಅವಧಿಯು ಐದು ವರ್ಷಗಳಾಗಿದ್ದು 2006–07ನೇ ಆರ್ಥಿಕ ಸಾಲಿನಿಂದ ಪ್ರಾರಂಭಗೊಂಡು 2010–11ನೇ ಆರ್ಥಿಕ ಸಾಲಿನವರೆಗೆ ಅನುಷ್ಠಾನಗೊಳ್ಳಲಿದೆ. ಯೋಜನಾ ವೆಚ್ಚ ರೂ. 600 ಕೋಟಿಗಳಾಗಿವೆ. ಯೋಜನೆಯಡಿ ಯೋಜನಾ ವ್ಯಾಪ್ತಿಯ ಗ್ರಾಮಪಂಚಾಯತಿಗಳಿಗೆ ಪ್ರತಿ ಆರ್ಥಿಕ ಸಾಲಿನಲ್ಲಿ ಮುಕ್ತ ಅನುದಾನವನ್ನು ಒದಗಿಸುವ ಮೂಲಕ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಕಾಮಗಾರಿಗಳನ್ನು ಕೈಗೊಂಡು ಗ್ರಾಮ ಪಂಚಾಯತಿಗಳನ್ನು ಸದೃಢಗೊಳಿಸುವ ವ್ಯಾಪಕ ಉದ್ದೇಶ ಹೊಂದಲಾಗಿದೆ.

ಇದಲ್ಲದೇ ಯೋಜನೆಯಡಿ ರಾಜ್ಯದ 175 ತಾಲ್ಲೂಕು ಕೇಂದ್ರಗಳಲ್ಲಿ ಸಾಮರ್ಥ್ಯ ಸೌಧ (ತರಬೇತಿ ಕೇಂದ್ರಗಳು) ಕಟ್ಟಡಗಳನ್ನು ಸಹ ನಿರ್ಮಾಣ ಮಾಡಲಾಗುತ್ತಿದೆ.

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ವಿಶ್ವ ಬ್ಯಾಂಕ್ ಆರ್ಥಿಕ ನೆರವಿನ ಎರಡು ಯೋಜನೆಗಳು ಅನುಷ್ಠಾನಗೊಳ್ಳುತ್ತಿದ್ದು ಅವುಗಳ ವಿವರಗಳು ಈ ಕೆಳಗಿನಂತಿವೆ.

ಯೋಜನೆ	ವಿಶ್ವಬ್ಯಾಂಕಿನಿಂದ ಪಡೆದ ಸಾಲದ ನೆರವು (ರೂ. ಕೋಟಿಗಳಲ್ಲಿ)
ಗ್ರಾಮ ಸ್ವರಾಜ್ – ಕರ್ನಾಟಕ ಪಂಚಾಯತಿ ಸಬಲೀಕರಣ ಯೋಜನೆ	540.00
ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆಯು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವ್ಯಾಪ್ತಿಯ ಒಂದು ಸ್ವಾಯತ್ತ ಸಂಸ್ಥೆಯಾಗಿದ್ದು, ಈ ಸಂಸ್ಥೆಯ ವತಿಯಿಂದ ವಿಶ್ವ ಬ್ಯಾಂಕ್ ನೆರವಿನ 2ನೇ ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಯೋಜನೆ – ಜಲ ನಿರ್ಮಲ ಯೋಜನೆಯನ್ನು ರಾಜ್ಯದ ಉತ್ತರ ಕರ್ನಾಟಕದ 11 ಜಿಲ್ಲೆಗಳಲ್ಲಿ ಒಟ್ಟು ರೂ. 997 ಕೋಟಿಗಳ ಅಂದಾಜು ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಇದರಲ್ಲಿ ವಿಶ್ವ ಬ್ಯಾಂಕ್ ರೂ. 728.00 ಕೋಟಿಗಳ ಮರುಭರ್ತಿ ರೂಪದ ಸಾಲದ ನೆರವನ್ನು ನೀಡುತ್ತಿದೆ.	728.00
ಒಟ್ಟು	**1268.00**